# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/04/2020-21 ದಿನಾಂಕ: 20/11/2020.

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21 ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ.10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 20/11/2020 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ವಾರ್ಡ್ ಸಮಿತಿ ಸದಸ್ಯರು**

1. ಶ್ರೀ ಅಮರ್ ಸಿಂಗ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
2. ಶ್ರೀ ವಿಜಯ್ ಬೆನಗಿ, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
3. ಶ್ರೀ ಸುಜಿತ್ ಸೋನಿಲ್, ವಸತಿ ಕ್ಷೇಮಾಭಿವೃದ್ಧಿ ಸಂಘದ ಸದಸ್ಯರು
4. ಶ್ರೀ ಪ್ರಕಾಶ್ ಕೆ, ಸದಸ್ಯರು
5. ಶ್ರೀ ದಯಾಳ್, ಸದಸ್ಯರು
6. ಶ್ರೀ ಶ್ರೀನಿವಾಸ್, ಸದಸ್ಯರು
7. ಶ್ರೀ ಆರ್.ಎಂ. ಶ್ರೀನಿವಾಸ್, ಸದಸ್ಯರು
8. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು
9. ಶ್ರೀ ಮಲ್ಯಾದಿ, ಸದಸ್ಯರು

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀ ಶಿವಕುಮಾರ್ ಗೌಡರ್, ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೃ.ನೀ.ಗಾ)
3. ಶ್ರೀ ಪ್ರಕಾಶ್, ಸಹಾಯಕ ಕಾರ್ಯಪಾಲಕ ಅಭಿಯಂತರರು (ಕೆರೆಗಳು)
4. ಶ್ರೀ ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು & ಕಾರ್ಯದರ್ಶಿ ಹಾಗೂ ಸಂಚಾಲಕರು
5. ಕಲ್ಯಾಣಾಧಿಕಾರಿಗಳು, ಬ್ಯಾಟರಾಯನಪುರ ವಿಭಾಗ
6. ಶ್ರೀ ಸತ್ಯನಾರಾಯಣ, ಕಂದಾಯ ವಸೂಲಿಗಾರರು
7. ಶ್ರೀ ಪ್ರಭಾಕರ್, ಹಿರಿಯ ಆರೋಗ್ಯ ಪರಿವೀಕ್ಷಕರು
8. ಶ್ರೀ ಭೂಷಣ್, ಸಹಾಯಕ ಅಭಿಯಂತರರು (ಕೆರೆಗಳು)
9. ಶ್ರೀ ನಾರಾಯಣಸ್ವಾಮಿ, ಸಹಾಯಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ)
10. ಶ್ರೀ ಮಹೇಶ್ ಕುಮಾರ್ ಎಲ್, ಕಿರಿಯ ಆರೋಗ್ಯ ಪರಿವೀಕ್ಷಕರು
11. ಶ್ರೀ ಸುರೇಶ್ ಈ.ಎಸ್, ಬಿಬಿಎಂಪಿ ಮಾರ್ಷಲ್
12. ಶ್ರೀ ಪ್ರಕಾಶ್ ಕೆ, ಸದಸ್ಯರು
13. ಶ್ರೀ ದಯಾಳ್, ಸದಸ್ಯರು
14. ಶ್ರೀ ಶ್ರೀನಿವಾಸ್, ಸದಸ್ಯರು
15. ಶ್ರೀ ಮಲ್ಯಾದಿ, ಸದಸ್ಯರು
16. ಶ್ರೀ ಆರ್ ಎಂ ಶ್ರೀನಿವಾಸ್, ಸದಸ್ಯರು
17. ಶ್ರೀ ಗೋಪಾಲ್‌ಕೃಷ್ಣ, ಸದಸ್ಯರು

<u>ಗೈರುಹಾಜರಾಗಿರುವ ಅಧಿಕಾರಿಗಳು</u>

1. ಶ್ರೀಮತಿ ಡಾ ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ
2. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ವಿದ್ಯಾರಣ್ಯಪುರ, ಬೆಂಗಳೂರು
3. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ಬೆಂಗಳೂರು
4. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಯಲಹಂಕ ವಲಯ, ಬೆಂಗಳೂರು
5. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಲಾ ಅಂಡ್ ಆರ್ಡರ್)
6. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಸಂಚಾರ)
7. ಕಾರ್ಯಪಾಲಕ ಅಭಿಯಂತರರು, ಯೋಜನಾ ವಿಭಾಗ, ಯಲಹಂಕ ವಲಯ

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

**ಶ್ರೀನಿವಾಸ್, ಮಲ್ಯಾದ್ರಿ, ಪಿ. ಪಿಳ್ಳಪ್ಪ, ಪ್ರಕಾಶ್. ಕೆ, ಸದಸ್ಯರು:-** ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಬರುವ ದೊಡ್ಡಬೊಮ್ಮಸಂದ್ರ ಕೆರೆಯಲ್ಲಿ ಬೆಳೆದಿರುವಂತಹ ಹುಲ್ಲು (ಕಳೆ), ಸಿಲ್ಟ್ ತೆರವುಗೊಳಿಸಲು ಕೋರಿರುತ್ತಾರೆ ಹಾಗೂ ಈಶಾನ್ಯ ಭಾಗದಲ್ಲಿ ಪ್ರಸ್ತುತ ನಾಲ್ಕು ಅಡಿ ಅಗಲದ ಡಿಸ್ಚಾರ್ಜ್ ಕಾಲುವೆಯಿದ್ದು ಅದನ್ನು ಹೆಚ್ಚಿಸಲು ಕೋರಿರುತ್ತಾರೆ, ಮುಂದುವರೆದು ಸ.ಕಾ.ನಿ.ಅ (ಕೆರೆಗಳು ಹಾಗೂ ಬೃಹತ್ ನೀರುಗಾಲುವೆ) ರವರು ಸರ್ವೆ ಮಾಡಿಸಿ ಕ್ರಮಕೈಗೊಳ್ಳುವುದಾಗಿ ತಿಳಿಸಿರುತ್ತಾರೆ.

**ಗೋಪಾಲ್‌ಕೃಷ್ಣ, ಸದಸ್ಯರು:-** ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಬರುವ ಬೃಹತ್ ನೀರುಗಾಲುವೆಯಲ್ಲಿ ತೆಗೆದಿರುವ ಹೂಳನ್ನು ಸ್ಥಳದಿಂದ ತೆರವುಗೊಳಿಸಲು ಕೋರಿರುತ್ತಾರೆ.

**ಗೋಪಾಲ್‌ಕೃಷ್ಣ, ಎಂ. ಶ್ರೀನಿವಾಸ್, ಪಿ. ಪಿಳ್ಳಪ್ಪ, ಮಲ್ಯಾದ್ರಿ, ಸದಸ್ಯರು:-** ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಬರುವ ರಾಮಚಂದ್ರಪುರ ಮುಖ್ಯರಸ್ತೆಯಲ್ಲಿ ಬೀದಿ ದೀಪಗಳು ಕಾರ್ಯನಿರ್ವಹಿಸುತ್ತಿರುವುದಿಲ್ಲ ಆದ್ದರಿಂದ ಸದರಿ ದೀಪಗಳನ್ನು ದುರಸ್ಥಿ ಮಾಡಲು ಕೋರಿರುತ್ತಾರೆ.

**ಗೋಪಾಲ್‌ಕೃಷ್ಣ, ಎಂ. ಶ್ರೀನಿವಾಸ್, ಪಿ. ಪಿಳ್ಳಪ್ಪ, ಮಲ್ಯಾದ್ರಿ, ಸದಸ್ಯರು:-** ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಪ್ರಸ್ತುತ ವಾರಕ್ಕೆ ಎರಡು ಬಾರಿ ಮಾತ್ರ ಕಾವೇರಿ ನೀರು ಬರುತ್ತಿದ್ದು, ಅದೂ ಕೂಡ ತಡರಾತ್ರಿ ಬರುತ್ತಿರುತ್ತದೆ. ಬಿ.ಡಬ್ಲ್ಯೂ.ಎಸ್.ಎಸ್.ಬಿ ಬೋರ್‌ವೆಲ್‌ಗಳ ಮೂಲಕ ನೀರು ಸರಬರಾಜನ್ನು ಕನಿಷ್ಠ ಪಕ್ಷ ದಿನ ಬಿಟ್ಟು ದಿನ ನೀರು ಸರಬರಾಜು ಮಾಡಲು ಕ್ರಮಕೈಗೊಳ್ಳಲು ಕೋರಿರುತ್ತಾರೆ.
ಕಾಳಪ್ಪ ಲೇಔಟ್, ಕಾಟೇರಮ್ಮ ಲೇಔಟ್ ಮತ್ತು ರಾಘವೇಂದ್ರ ಮಠ ಬಡಾವಣೆಗಳಲ್ಲಿ ಕಾವೇರಿ ನೀರು ಸರಬರಾಜು ಮಾಡಲು ಇಲ್ಲಿಯವರೆಗೂ ಯಾವುದೇ ರೀತಿಯ ಕ್ರಮಕೈಗೊಂಡಿರುವುದಿಲ್ಲ. ಆದ್ದರಿಂದ ಸದರಿ ಪ್ರದೇಶಗಳಲ್ಲಿ ಕಾವೇರಿ ನೀರನ್ನು ಸಾರ್ವಜನಿಕರಿಗೆ ಒದಗಿಸಲು ಕ್ರಮಕೈಗೊಳ್ಳಲು ಕೋರಿರುತ್ತಾರೆ.

**ಶ್ರೀನಿವಾಸ್, ಮಲ್ಯಾದ್ರಿ, ಗೋಪಾಲ್‌ಕೃಷ್ಣ, ಸದಸ್ಯರು:-** ದೊಡ್ಡಬೊಮ್ಮಸಂದ್ರ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆಯನ್ನು ಆಟೋ ಮೂಲಕ ಬರುವ ಆಟೋ ಟಿಪ್ಪರ್‌ಗಳಿಗೆ ವಿಷಲ್ ಮೂಲಕ ಮನೆ ಮನೆಯಿಂದ ಕಸ ಹಾಕಲು ತಿಳಿಸಲು ಹಾಗೂ ಪ್ರತಿದಿನ ಒಂದೇ ಸಮಯವನ್ನು ಪಾಲಿಸಬೇಕೆಂದು ಕೋರಿರುತ್ತಾರೆ ಮತ್ತು ದೊಡ್ಡಬೊಮ್ಮಸಂದ್ರ ಬಳಿಯಿರುವ ಸ್ಮಶಾನದ ಮುಂದೆ ಇರುವ ಕಸದ ಬ್ಲಾಕ್‌ಸ್ಪಾಟ್ ಅನ್ನು ತೆರವುಗೊಳಿಸಲು ತಿಳಿಸಿರುತ್ತಾರೆ.

ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

Sweta-N R
ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ 10, ದೊಡ್ಡಬೊಮ್ಮಸಂದ್ರ

20/11/2020
ನೋಡೆಲ್ ಅಧಿಕಾರಿ ವಾರ್ಡ್-10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

ಪ್ರತಿಯನ್ನು:

1. ಜಂಟಿ ಆಯುಕ್ತರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಆರೋಗ್ಯ ವೈದ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರಿಗೆ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ/ಯೋಜನಾ ವಿಭಾಗ, ಬಿ.ಬಿ.ಎಂ.ಪಿ ರವರಿಗೆ ಸಲ್ಲಸಿದೆ
5. ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ, ಬಿಬಿಎಂಪಿ, ಬೆಂಗಳೂರು ರವರಿಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಯಲಹಂಕ ವಲಯ, ಬೆಂಗಳೂರು
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿದ್ಯಾರಣ್ಯಪುರ ವಿಭಾಗ ರವರಿಗೆ ಸಲ್ಲಿಸುತ್ತಾ ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಹಾಗೂ ಘನತ್ಯಾಜ್ಯ ನಿರ್ವಹಣೆಯ ಗುತ್ತಿಗೆದಾರರೊಂದಿಗೆ ಸಭೆಗೆ ಹಾಜರಾಗಲು ಕೋರಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂ.ಎಸ್.ಎಸ್.ಬಿ, ಬೆಂಗಳೂರು.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪಗಳ ನಿರ್ವಹಣೆ, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ವಿದ್ಯಾರಣ್ಯಪುರ, ಬೆಂಗಳೂರು ರವರಿಗೆ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
12. ಕಾಂಟ್ಯಾಕ್ಟ್ ಟ್ರೇಸಿಂಗ್ ನೋಡೆಲ್ ಅಧಿಕಾರಿ, ಬ್ಯಾಟರಾಯನಪುರ ವಿಭಾಗ, ಬೆಂಗಳೂರು ರವರಿಗೆ ಸಲ್ಲಿಸಿದೆ.
13. ಹೋಮ್ ಕ್ವಾರಂಟೇನ್ ಸ್ಕ್ವಾಡ್ ನೋಡೆಲ್ ಅಧಿಕಾರಿ, ಬ್ಯಾಟರಾಯನಪುರ ವಿಭಾಗ, ಬೆಂಗಳೂರು ರವರಿಗೆ ಸಲ್ಲಿಸಿದೆ.
14. ಕಲ್ಯಾಣಾಧಿಕಾರಿ, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
15. ಉಪ ವಲಯ ಅರಣ್ಯ ಸಂರಕ್ಷಣಾಧಿಕಾರಿಗಳು, ಯಲಹಂಕ ವಲಯ, ಬೆಂಗಳೂರು ರವರಿಗೆ ಸಲ್ಲಿಸಿದೆ.
16. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಲಾ ಅಂಡ್ ಆರ್ಡರ್) ರವರಿಗೆ ಸಲ್ಲಿಸಿ ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
17. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೊಲೀಸ್ ಠಾಣೆ (ಸಂಚಾರ) ರವರಿಗೆ ಸಲ್ಲಿಸಿ ಸಭೆಗೆ ತಪ್ಪದೇ ಹಾಜರಿರಲು ಕೋರಿದೆ.
18. ಕಛೇರಿ ಕಡತಕ್ಕೆ.